# ಭವಿಷ್ಯದಲ್ಲಿ ಶುದ್ಧಗಾಳಿ ಸಿಗಲು ಪ್ರಕೃತಿ ಉಳಿಸಿ

**ವಿಕ ಸುದ್ದಿಲೋಕ** ನೆಲಮಂಗಲ

ನಗರ ಪ್ರದೇಶಗಳಲ್ಲಿ ವಾಯುವಿನ ತಾಪಮಾನ ಹೆಚ್ಚಾಗುತ್ತಿದ್ದು ಮುಂದಿನ ಪೀಳಿಗೆಗೆ ಶುದ್ಧಗಾಳಿ ಬೇಕಾದರೇ ಪ್ರಕೃತಿ ಉಳಿಸಬೇಕಾಗಿದೆ ಎಂದು ರಾಜ್ಯ ಪರಿಸರ ಮಾಲಿನ್ಯಾಧಿಕಾರಿ ಮಹೇಶ್ ಸಲಹೆ ನೀಡಿದರು.



ನೆಲಮಂಗಲ ಸಮೀಪದ ಸೊಂಡೆಕೊಪ್ಪದಲ್ಲಿ ಆರ್.ವಿ. ಕಾಲೇಜಿನ ಎನ್ನೆಸ್ಸೆಸ್ ವಿದ್ಯಾರ್ಥಿಗಳು ಹಾಗೂ ಮುಖ್ಯಅತಿಥಿಗಳು ಸಸಿಗಳನ್ನು ನೆಟ್ಟು ಜಾಗೃತಿ ಮೂಡಿಸಿದರು.

ನಗರ ಸಮೀಪ ಬೆಂಗಳೂರು ಉತ್ತರ ತಾಲೂಕಿನ ಸೊಂಡೆಕೊಪ್ಪ ಗ್ರಾಮದ ಕೆರೆ ಅಂಗಳದಲ್ಲಿ ಆರ್.ವಿ. ಎಂಜನಿಯರಿಂಗ್ ಕಾಲೇಜಿನ ಎನ್ನೆಸ್ಸೆಸ್ ವಿದ್ಯಾರ್ಥಿಗಳು 500ಕ್ಕೂ ಹೆಚ್ಚು ಗಿಡಗಳನ್ನು ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪರಿಸರ ಉಳಿಸಿದಾಗ ಮಾತ್ರ ಮಾನವನ ಭವಿಷ್ಯದ ಜೀವನ ಅಭಿವೃದ್ಧಿಯಾಗುತ್ತದೆ ಸೊಂಡೆಕೊಪ್ಪದ ಕೆರೆ ಪ್ರದೇಶದಲ್ಲಿ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದು ವಿದ್ಯಾರ್ಥಿಗಳಿಂದ ಗಿಡ ನೆಡುವ ಮಹತ್ವ ಸಾರುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ.ವಿಶ್ವಸಂಸ್ಥೆ ಸೆಪ್ಟೆಂಬರ್ 7ರಂದು ಉತ್ತಮ ಗಾಳಿ,ನೀಲಿ ಆಕಾಶದಲ್ಲಿ ಕಾರ್ಯಕ್ರಮ ನಡೆಯುತ್ತಿದ್ದು ನಾವೆಲ್ಲರೂ ಆಚರಣೆ ಮಾಡಬೇಕಾಗಿದೆ,ರಾಜ್ಯದಲ್ಲಿ 4ನಗರದಲ್ಲಿ ವಾಯು ಮಾಲಿನ್ಯ ತಪಾಸಣಾ ಘಟಕ ನಿರ್ಮಿಸಿಲಿದ್ದೇವೆ, ಕೈಗಾರಿಕಾ ಪ್ರದೇಶದಲ್ಲಿ ಗಿಡಮರಗಳನ್ನು ಕಡ್ಡಾಯವಾಗಿ ಬೆಳೆಸಲು ಸೂಚಿಸಲಾಗಿದ್ದು, ವಾಯುಮಾಲಿನ್ಯ ನಿಯಂತ್ರಣಕ್ಕೆ ಶ್ರಮಿಸುತ್ತಿದ್ದೇವೆ ಎಂದರು.

ಆರ್.ವಿ. ಎಂಜನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ಸುಬ್ರಹ್ಮಣ್ಯ ಮಾತನಾಡಿ, ಕಾಲೇಜು ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಯಲ್ಲಿ ತೊಡಗಿಸಿಕೊಳ್ಳಲು ಎನ್ನೆಸ್ಸೆಸ್ ಘಟಕ ಸಹಕಾರಿಯಾಗಿದ್ದು ವಿದ್ಯಾರ್ಥಿಗಳು ಗಿಡಗಳನ್ನು ನೆಟ್ಟು ಪೋಷಣೆಗೆ ಮುಂದಾಗಿರುವುದು ಸ್ವಾಗತಾರ್ಹ. ನಗರದಲ್ಲಿ ಹೆಚ್ಚು ವಾಯುಮಾಲಿನ್ಯ ಉಂಟಾಗುತ್ತಿರುವ ಕಾರಣ ನಗರ ಬಿಟ್ಟು ಗ್ರಾಮೀಣ ಪ್ರದೇಶಕ್ಕೆ ಜನರು ಬರುತ್ತಿದ್ದಾರೆ.. ಇದರಿಂದ ಗ್ರಾಮೀಣ ಪ್ರದೇಶದಲ್ಲಿಯೂ ಸಹ ಮಾಲಿನ್ಯ ಹೆಚ್ಚಾಗುತ್ತಿದೆ, ನಗರದ ಜನರು ಹಳ್ಳಿಗೆ ಬಂದು ರೆಸಾರ್ಟ್ ಮಾಡುವುದು ಬಿಡಬೇಕು ಪ್ರಕೃತಿ ಉಳಿಸಬೇಕು ಎಂದರು.

**ಮರಗಳು ಉಳಿಯಲಿ:** ಸೊಂಡೆಕೊಪ್ಪ ಗ್ರಾಮದ ಕೆರೆ ಅಂಗಳದಲ್ಲಿ ಆರ್.ವಿ.ಕಾಲೇಜಿನ ಎನ್ನೆಸ್ಸೆಸ್ ವಿದ್ಯಾರ್ಥಿಗಳು ಸುಮಾರು 500ಕ್ಕೂ ಹೆಚ್ಚು ಗಿಡಗಳನ್ನು ಕಳೆದ ಒಂದು ತಿಂಗಳಿಂದ ನೆಟ್ಟು ಪೋಷಣೆ ಮಾಡಿದ್ದಾರೆ. ಆಗಸ್ಟ್ 15ರಿಂದ ಸೆಪ್ಟಂಬರ್ 15ರವರೆಗೂ ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸಲಾಗಿದೆ ಎಂದು ಎನ್ನೆಸ್ಸೆಸ್ ಅಧಿಕಾರಿ ಡಾ.ಲೋಕೇಶ್ವರಿ ತಿಳಿಸಿದರು.

ಸೊಂಡೆಕೊಪ್ಪ ಪಂಚಾಯತಿ ಪಿಡಿಓ ವೆಂಕಟೇಶ್, ಸಸ್ಯ ತಜ್ಞೆ ಡಾ.ಪ್ರತಿಭಾವಿನಯ್, ಎನ್ನೆಸ್ಸೆಸ್ ಅಧಿಕಾರಿ ಡಾ.ಲೋಕೇಶ್ವರಿ ಹಾಗೂ ಸ್ಥಳೀಯ ಮುಖಂಡರು ಮತ್ತು ಶಿಬಿರಾರ್ಥಿಗಳು ಭಾಗವಹಿಸಿದ್ದರು.